**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**

**ತಿ ನರಸೀಪುರ**

**ಸಿ ಸಿ ಸಂಖ್ಯೆ: 490/2023**

**ದೋಷಾರೋಪಣೆ**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ಟಿ ನರಸೀಪುರ ಆದ ನಾನು

ಬಸವರಾಜು ಬಿನ್ ಲೇಟ್ ಮಲ್ಲಯ್ಯ,
45 ವರ್ಷ,
ವಾಸಃ ಕನ್ನಹಳ್ಳಿ ಗ್ರಾಮ,
ತಿ ನರಸೀಪುರ ತಾಲ್ಲೂಕು,
ಮೈಸೂರು ಜಿಲ್ಲೆ.

ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ದೋಷಾರೋಪ ಎನೆಂದರೆ :-

ಮೊದಲನೆಯದಾಗಿ, ದಿನಾಂಕ 02.02.2023 ರಂದು ಬೆಳಿಗ್ಗೆ 11.00 ಗಂಟೆ ಸಮಯದಲ್ಲಿ, ತಿ.ನರಸೀಪುರ ಪೋಲಿಸ್ ಠಾಣಾ ಸರಹದ್ದಿನ, ತಿ. ನರಸೀಪುರ ತಾಲ್ಲೂಕಿನ ಕೊತ್ತೇಗಾಲ ಗ್ರಾಮದ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ, ಚಾಸಾ-1/ಶಿವರುದ್ರ ರವರಿಗೆ ಸೇರಿದ ಸರ್ವೆ ನಂ.444 ರ 10 ಗುಂಟೆ ಜಮೀನಿನ ವಿಚಾರದಲ್ಲಿ, ಆರೋಪಿತರಾದ ನೀವು ಚಾಸಾ-1 ರವರನ್ನು ಉದ್ದೇಶಿಸಿ, "ಬೋಳಿ ಮಗನೆ, ಸೂಳೇ ಮಗನೆ" ಎಂಬ ಅವಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕ ನೆಮ್ಮದಿಗೆ ಭಂಗ ಉಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ

504 ಸಹ ಕಲಂ 34ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಎರಡನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು ನಿಮ್ಮ ಕೈಯಿಂದ ಚಾಸಾ–1 ರವರ ಕಪಾಲಕ್ಕೆ ಮತ್ತು ತಲೆಗೆ ಹೊಡೆದು ಅವರಿಗೆ ಸಾದಾ ಸ್ವರೂಪದ ನೋವುಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹ ಕಲಂ 34ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಮೂರನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು ಚಾಸಾ–1 ರವರನ್ನು ಉದ್ದೇಶಿಸಿ "ಸಾಯಿಸದೆ ಬಿಡುವುದಿಲ್ಲ" ಎಂದು ಪ್ರಾಣ ಬೆದರಿಕೆ ಉಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹ ಕಲಂ 34ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾನು ಈ ಮೇಲಿನ ದೋಷಾರೋಪಣೆಗಳ ಮೇಲೆ ಈ ನ್ಯಾಯಾಲಯದ ವಿಚಾರಣೆಗೆ ನೀವು ಗುರಿಯಾಗಬೇಕೆಂದು ನಿರ್ದೇಶಿಸುತ್ತೇನೆ.

ದಿನಾಂಕ 06.03.2025.

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ., ತಿ. ನರಸೀಪುರ**

**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**

**ತಿ ನರಸೀಪುರ**

**ಸಿ ಸಿ ಸಂಖ್ಯೆ: 490/2023**

**ದೋಷಾರೋಪಣೆ**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ಟಿ ನರಸೀಪುರ ಆದ ನಾನು

ಬಸವರಾಜು ಬಿನ್ ಲೇಟ್ ಮಲ್ಲಯ್ಯ,
45 ವರ್ಷ,
ವಾಸಃ ಕನ್ನಹಳ್ಳಿ ಗ್ರಾಮ,
ತಿ ನರಸೀಪುರ ತಾಲ್ಲೂಕು,
ಮೈಸೂರು ಜಿಲ್ಲೆ.

ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರಃ ಹೌದು

ಪ್ರಶ್ನೆಃ ನೀವು ಸದರಿ ದೋಷಾರೋಪವನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರಃ ವಿಚಾರಣೆಯಾಗಬೇಕು.

(ಮೇಲಿನ ದೋಷಾರೋಪಣೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

ದಿನಾಂಕ 06.03.2025

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ., ತಿ. ನರಸೀಪುರ**